# ಕರ್ನಾಟಕ  ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1252 (1479)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಪಶುಸಂಗೋಪನೆ ಸಚಿವರು

ವಿಷಯ : ಕುರಿ ಸಾಕಾಣಿಕೆದಾರರ ಅಭಿವೃದ್ಧಿ ಬಗ್ಗೆ

(ಅ) ರಾಜ್ಯದ ರೈತರಿಗೆ ಮತ್ತು ಸಾಕಾಣಿಕೆದಾರರಿಗೆ ಉದ್ಯೋಗ ಒದಗಿಸುವ ಕುರಿ ಸಾಕಾಣಿಕೆಯಲ್ಲಿ ಕುರಿ ಮಾಂಸ ಮತ್ತು ಗೊಬ್ಬರಕ್ಕೆ ಹೆಚ್ಚಿನ ಬೇಡಿಕೆ ಇರುವುದು ನಿಜವೇ; (ವಿವರ ನೀಡುವುದು)

(ಆ) ರಾಜ್ಯದಲ್ಲಿನ ರೈತರು ಮತ್ತು ಕುರಿ ಸಾಕಾಣಿಕೆದಾರರು, ಹಳೆಯ, ನೂತನವಲ್ಲದ ಮತ್ತು ಲಾಭದಾಯಕವಲ್ಲದ ಕುರಿ ಸಾಕಾಣಿಕೆ ಪದ್ಧತಿಯನ್ನು ಅನುಸರಿಸುತ್ತಿರುವುದರಿಂದ ಅವರ ಪರಿಶ್ರಮ ಮತ್ತು ಬಂಡವಾಳ ಹೂಡಿಕೆಗೆ ತಕ್ಕಂತೆ ಲಾಭದಾಯಕವಾಗಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ರೂಪಿಸಿರುವ ಕಾರ್ಯಕ್ರಮ ಮತ್ತು ಯೋಜನೆಗಳೇನು ; (ವಿವರ ನೀಡುವುದು)

(ಇ) ಕುರಿ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ಸಂಶೋಧನೆ ಸಂಸ್ಥೆಯಾದ Central Sheep Training Center ನ್ನು ರಾಜ್ಯದಲ್ಲಿ ಸ್ಥಾಪಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ; ಇಲ್ಲದಿದ್ದಲ್ಲಿ, ಈಗಲಾದರೂ ಪ್ರಸ್ತಾವನೆ ಸಲ್ಲಿಸಲು ಮುಂದಾಗುವುದೇ ?